ಆ) ಈ ಬಗ್ಗೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು?

ಇ) ಯಾವಾಗ ಇದನ್ನು ಮಂಜೂರು ಮಾಡಲಾಗುವುದು?

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು) :-

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಚಿಕ್ಕನಾಯಕನಹಳ್ಳಿ ತಾಲ್ಲೂಕು ಹಂದನಕೆರೆಯಲ್ಲಿ ಪೋಲೀಸ್ ಠಾಣೆ ಆರಂಭ

874(1797) ಶ್ರೀ ಜೆ.ಸಿ. ಮಾಧುಸ್ವಾಮಿ (ಚಿಕ್ಕನಾಯಕನಹಳ್ಳಿ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕು ಹಂದನಕೆರೆ ಹೋಬಳಿ ತಾಲ್ಲೂಕು ಕೇಂದ್ರದಿಂದ ದೂರದ ಸ್ಥಳದಲ್ಲಿದ್ದು ಅಲ್ಲಿನ ಕಾನೂನು ವ್ಯವಸ್ಥೆಯನ್ನು ಹತೋಟಿಯಲ್ಲಿಡಲು ಕಷ್ಟವಾಗುತ್ತಿರುವುದರಿಂದ ಒಂದು ಪೋಲಿಸ್‌ಠಾಣೆ ಮಂಜುರಾತಿಗಾಗಿ ಅನೇಕ ಶಿಫಾರಸ್ಸುಗಳಾಗಿದ್ದುದು ಸರ್ಕಾರಕ್ಕೆ ಗೊತ್ತಿದೆಯೇ?

ಆ) ಹಾಗಿದ್ದಲ್ಲಿ ಸದರಿ ವರ್ಷದಲ್ಲಿ ಪೋಲಿಸ್‌ಠಾಣೆಯನ್ನು ಮಂಜೂರು ಮಾಡಲಾಗಿದೆಯೇ?

ಇ) ಇಲ್ಲದಿದ್ದಲ್ಲಿ ಏನು ಕ್ರಮ ಕೈಗೊಳ್ಳಲಾಗುವುದು?

ಶ್ರೀ ಎಂ.ವೀರಪ್ಪಮೊಯಿಲಿ(ಮುಖ್ಯಮಂತ್ರಿಗಳು) :-

ಅ) ಹೌದು.

ಆ) ಆದ್ಯತೆ, ಅಗತ್ಯತೆ ಹಾಗೂ ಸಂಪನ್ಮೂಲ ಆಧರಿಸಿ ಮುಂಬರುವ ವರ್ಷಗಳಲ್ಲಿ ಮಂಜೂರು ಮಾಡಲು ಪರಿಶೀಲಿಸಲಾಗುತ್ತಿದೆ.

ಇ) ಆ)ನಲ್ಲಿ ಉತ್ತರಿಸಿದೆ.

ಮಂತ್ರಿ ಮಂಡಲದ ಸದಸ್ಯರ ನೀತಿ ಸಂಹಿತೆ

875(1796) ಶ್ರೀ ಪಿ.ಜಿ.ಆರ್. ಸಿಂಧ್ಯ(ಕನಕಪುರ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಂತ್ರಿಮಂಡಲದ ಸಚಿವರುಗಳಿಗೆ ನೀತಿ ಸಂಹಿತೆ ಮತ್ತು ಕೆಲಸದ ವೇಳೆಯನ್ನು ನಿಗದಿಪಡಿಸಿರುವುದು ನಿಜವೇ?

ಆ) ಹಾಗಿದ್ದಲ್ಲಿ, ವಿವರಗಳನ್ನು ಕೊಡುವುದು?

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು) :-

ಅ) ನಿಜ.